3. ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2005.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಆರ್. ಮೋರೆ (ಪೌರಾಡಳಿತ ಮತ್ತು ಕರ್ನಾಟಕ ನಗರ ಮೂಲ ಸೌಕರ್ಯ ಮತ್ತು ಹಣಕಾಸು ನಿಗಮ ಸಚಿವರು): ಮಾನ್ಯ ಅಧ್ಯಕ್ಷರೆ, "2005ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾಪ ಏನೆಂದರೆ,

"2005ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಆರ್. ಮೋರೆ (ಪೌರಾಡಳಿತ ಮತ್ತು ಕರ್ನಾಟಕ ನಗರ ಮೂಲ ಸೌಕರ್ಯ ಮತ್ತು ಹಣಕಾಸು ನಿಗಮ ಸಚಿವರು) : ಮಾನ್ಯ ಅಧ್ಯಕ್ಷರೆ, "2005ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ–4)

ಅಧ್ಯಕ್ಷರ ಅನುಮತಿ ಮೇರೆಗೆ

(ಅ) ವಿಷಯ: ಗಣರಾಜ್ಯೋತ್ಸವ ಸಮಾರಂಭಗಳಲ್ಲಿ ತಾಲ್ಲೂಕಿನ ಮಟ್ಟದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಸಮಾರಂಭ ನಡೆಸುವ ಬಗ್ಗೆ

ಶ್ರೀ ಬಿ.ಎಸ್. ಯಡಿಯೂರಪ್ಪ (ವಿರೋಧ ಪಕ್ಷದ ನಾಯಕರು): ಮಾನ್ಯ ಅಧ್ಯಕ್ಷರೆ, ಮಾನ್ಯ ಉಪ ಮುಖ್ಯ ಮಂತ್ರಿಗಳಿದ್ದಾರೆ, ಮಾನ್ಯ ಎಂ.ಪಿ. ಪ್ರಕಾಶ್‌ರವರು ಹಿರಿಯರಿದ್ದಾರೆ, ಮಾನ್ಯ ಹೆಚ್.ಕೆ. ಪಾಟೀಲ್‌ರವರೂ ಇದ್ದಾರೆ, ನಾಳೆ ಗಣರಾಜ್ಯೋತ್ಸವ ನಡೆಯುತ್ತಿದೆ. ಬಹುತೇಕ ಎಲ್ಲಾ ಕಡೆ ಗಣರಾಜ್ಯೋತ್ಸವಕ್ಕೆ ಹಾಗೂ ಆಗಸ್ಟ್ 15ರ ಸ್ವಾತಂತ್ರ್ಯ ದಿನಾಚರಣೆಯ ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದಲ್ಲಿ ನಿಮ್ಮ ಉಸ್ತುವಾರಿ ಸಚಿವರು ಇರುತ್ತಾರೆ. ಅವರೇ ಧ್ವಜಾರೋಹಣ ಮಾಡುತ್ತಾರೆ. ಅದು ಸರಿ. ತಾಲ್ಲೂಕು ಮಟ್ಟದಲ್ಲಿ ಧ್ವಜಾರೋಹಣ ಮಾಡುವ ಬಗ್ಗೆ ನಾನು ಹೇಳುತ್ತಿಲ್ಲ. ಇದಕ್ಕೆ ತಿದ್ದುಪಡಿ ಆಗಬೇಕು. ಅದನ್ನು ನಾನು ಪ್ರಸ್ತಾಪ ಮಾಡುತ್ತೇನೆಂದು ತಿಳಿದುಕೊಳ್ಳಬೇಡಿ. ತಾಲ್ಲೂಕಿನ ಶಾಸಕರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ಬಹುತೇಕ ಎಲ್ಲಾ ಕಡೆಗಳಲ್ಲೂ ನಡೆಯುತ್ತದೆ. ಪದ್ಧತಿ ಇರುವುದೇ ಹಾಗೆ. ಆದರೆ ಕೆಲವು ತಾಲ್ಲೂಕುಗಳಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮಗಳು ನಡೆಯುತ್ತಿಲ್ಲ. ಆಹ್ವಾನ ಪತ್ರಿಕೆಯಲ್ಲಿ ಆಕಸ್ಮಾತ್ತಾಗಿ ತಪ್ಪಾಗಿದ್ದರೆ ನಾನು ಅದನ್ನು ಆಕ್ಷೇಪಣೆ ಮಾಡುವುದಿಲ್ಲ. ಡೆಪ್ಯುಟಿ ಕಮಿಷನರ್ ಮೂಲಕ ಸೂಚನೆ ಕಳುಹಿಸಿ ತಾಲ್ಲೂಕು ಮಟ್ಟದಲ್ಲಿ ಎಲ್ಲಾ ಕಡೆ ತಹಶೀಲ್ದಾರ್‌ರವರು ಧ್ವಜಾರೋಹಣ ಮಾಡುತ್ತಾರೆ. ಶಾಸಕರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಬೇಕು. ಬಹುತೇಕ